ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.

ಸಿಸಿ ನಂಬರ್ **1057 /2022**

| | | | |
|---|---|---|---|
| ಸಾಕ್ಷಿಯ ಹೆಸರು | : ಪ್ರಕಾಶ್ ಆರ್ | ಸಿ.ಡಬ್ಲ್ಯು 17 | |
| ತಂದೆಯ ಹೆಸರು | : ಎಂ.ರೇವಣಯ್ಯ | ಪಿ.ಡಬ್ಲ್ಯು 4 | |
| ವಯಸ್ಸು | : 51 ವರ್ಷ | | |
| ಉದ್ಯೋಗ | : ಮುಖ್ಯ ಪೇದೆ | | |
| ವಾಸ ಸ್ಥಳ | : ತರೀಕೆರೆ | | |

ದಿನಾಂಕಃ**14-10-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ನಾನು 2021 ರಿಂದ 2023 ರ ಮದ್ಯದಲ್ಲಿ ಮತ್ತು ಈಗಲೂ ಕೂಡ ತರೀಕೆರೆಯಲ್ಲಿ ಮುಖ್ಯ ಪೇದೆ ಎಂದು ಕೆಲಸ ಮಾಡುತ್ತಿದ್ದೇನೆ. ಈ ಪ್ರಕರಣದಲ್ಲಿ ದಿನಾಂಕ 13.03.2022 ರಂದು ನಾನು ಠಾಣೆಯಲ್ಲಿ ಇದ್ದಾಗ ರಾತ್ರಿ 11-15 ರ ಸುಮಾರಿಗೆ ಚಾಸಾ-1 ರವರು ನೀಡಿದ ಲಿಖಿತ ದೂರನ್ನು ಸ್ವೀಕರಿಸಿಕೊಂಡು ಗುನ್ಹೆ ದಾಖಲಿಸಿ ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿದ್ದೇನೆ. ದೂರನ್ನು ನಿ.ಪಿ-1 ಎಂದು ಈಗಾಗಲೇ ಗುರುತಿಸಲಾಗಿದೆ, ಸಾಕ್ಷಿಯ ಸಹಿಯನ್ನು ನಿ.ಪಿ-1(ಬಿ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ನಿ.ಪಿ-9 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ

ನಿ.ಪಿ-1 ನ್ನು ಚಾಸಾ-1 ರವರೇ ಟೈಪ್ ಮಾಡಿಸಿಕೊಂಡು ಬಂದಿದ್ದರು. ಚಾಸಾ-1 ರವರ ಸಹೋದರ ನಮ್ಮ ಠಾಣೆಯಲ್ಲಿ ಕೆಲಸ ಮಾಡುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಪಿರ್ಯಾದಿಯನ್ನು ಮತ್ತು ಷರಾವನ್ನು ಒಬ್ಬ ವ್ಯಕ್ತಿಯೇ ಬರೆದಿದ್ದಾರೆ ಎಂದರೆ ಸರಿಯಲ್ಲ. ಚಾಸಾ-1 ರವರ ಸಂಬಂಧಿಯ ಕುಮ್ಮಕ್ಕಿನಿಂದ ಆರೋಪಿಯ ಮೇಲೆ ಸುಳ್ಳು ಪ್ರಕರಣ ದಾಖಲಿಸಲಾಗಿದೆ ಎಂದರೆ ಸರಿಯಲ್ಲ. ಸುಳ್ಳು ಎಫ್.ಐ.ಎಸ್ ಆಧಾರದ ಮೇಲೆ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಅಪಘಾತ ಪ್ರಕರಣದಲ್ಲಿ ಪರಿಹಾರ ಪಡೆದುಕೊಳ್ಳಲು ನಿ.ಪಿ-1 ನ್ನು ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ.

ಮರುವಿಚಾರಣೆ : ಇಲ್ಲಃ

**(**ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.**)**

ಓ ಹೇ ಕೇ ಸ ಇ ಎ ಒ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.